ಶ್ರೀ ಸಿದ್ದರಾಮಯ್ಯ (ಪಶುಸಂಗೋಪನಾ ಮತ್ತು ಪಶುವೈದ್ಯ ಸೇವಾ ರಾಜ್ಯ ಸಚಿವರು).—

ಅ) ಪಶುವೈದ್ಯ ಶಾಲೆಗಳಿಗೆ ಇರುವ ಅಂತರ ಹಾಗೂ ದನಗಳ ಘಟಕಗಳ ಸಂಖ್ಯೆಗೆ ಅನುಗುಣವಾಗಿ ಮತ್ತು ಇತರೆ ಸೌಲಭ್ಯಗಳನ್ನು ಗಮನದಲ್ಲಿಟ್ಟುಕೊಂಡು ತೆರೆಯಲಾಗುವುದು.

ಆ) ಹೌದು. ಸೂಕ್ತ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಇ) ಗಮನಕ್ಕೆ ಬಂದಿದೆ.

ಇದು ಸ್ಥಳೀಯ ಪುರಸಭೆಯ ಕಟ್ಟಡವಾದ್ದರಿಂದ ಅವರೇ ದುರಸ್ತಿ ಕಾರ್ಯ ಕೈಗೊಳ್ಳಬೇಕಾಗಿದೆ. ಇದನ್ನು ಅವರ ಗಮನಕ್ಕೆ ತರಲಾಗಿದೆ.

ರಾಜ್ಯದ ಹಳ್ಳಿಗಳಲ್ಲಿನ ಉರ್ದು ಮತ್ತು ಕನ್ನಡ ಶಿಕ್ಷಕರ ಬಗ್ಗೆ

೧೪೨೮. ಶ್ರೀಮತಿ ಶಕುಂತಲಾ ಟಿ. ಚೌಗಲೆ (ಚಿಕ್ಕೋಡಿ).— ಮಾನ್ಯ ಪ್ರಾಥಮಿಕ ಹಾಗೂ ವಯಸ್ಕರ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಬಹುತೇಕ ಹಳ್ಳಿಗಳಲ್ಲಿ ಉರ್ದು ಶಾಲೆಗಳಲ್ಲಿ ೧೦ ರಿಂದ ೧೫ ವಿದ್ಯಾರ್ಥಿಗಳಿಗೆ ಒಬ್ಬ ಶಿಕ್ಷಕ ಮತ್ತು ಕನ್ನಡ ಶಾಲೆಯಲ್ಲಿ ೧೦–೧೫ ವಿದ್ಯಾರ್ಥಿಗಳಿಗೆ ಒಬ್ಬ ಶಿಕ್ಷಕ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ರೀತಿ ಇರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಹೆಚ್ಚಿನ ಹೊರೆ ಉಂಟಾಗುವುದಿಲ್ಲವೇ?

ಇ) ಸರ್ಕಾರದವರು ಉರ್ದು ಶಾಲೆಗಳನ್ನು ಕನ್ನಡ ಶಾಲೆಗೆ ವರ್ಗಾವಣೆ ಮಾಡುವುದು ಸೂಕ್ತವಾದುದರಿಂದ ಇದರ ಬಗ್ಗೆ ಸರ್ಕಾರದವರು ಏನಾದರೂ ಕ್ರಮ ಕೈಗೊಂಡಿರುವರೆ?

ಈ) ಹಾಗಿಲ್ಲದಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಈಗಲಾದರೂ ಕ್ರಮ ಕೈಗೊಳ್ಳುವರೆ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ವಯಸ್ಕರ ಶಿಕ್ಷಣ ರಾಜ್ಯ ಮಂತ್ರಿಗಳು).–

ಅ) ಹೌದು.

ಆ) ಹೌದು.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ದೇವನಹಳ್ಳಿ ತಾಲ್ಲೂಕಿನಲ್ಲಿ ಹಿರಿಯ ಪ್ರಾಥಮಿಕ ಶಾಲೆಗಳ ಕಟ್ಟಡಗಳು

೧೬೪೪. ಶ್ರೀ ಪಿ. ಸಿ. ಮುನಿಸ್ವಾಮಯ್ಯ (ದೇವನಹಳ್ಳಿ),—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವನಹಳ್ಳಿ ತಾಲ್ಲೂಕಿನಲ್ಲಿರುವ ಹಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು?

ಆ) ಇವುಗಳಲ್ಲಿ ಸ್ವಂತ ಕಟ್ಟಡಗಳನ್ನು ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು?

ಇ) ಹೊಸದಾಗಿ ಶಾಲಾ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?

ಶ್ರೀ ಎಂ. ರಘುಪತಿ (ಶಿಕ್ಷಣ ಮಂತ್ರಿಗಳು).—

ಅ) ೫೯.

ಆ) ೫೯.

ಇ) ಸಧ್ಯಕ್ಕೆ ಸಾಧ್ಯವಾಗಲಾರದು.